# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 891 |
| ಮಾನ್ಯ ಸದಸ್ಯರ ಹೆಸರು | ಶ್ರೀ ಭೀಮರಾವ್ ಬಸವರಾಜ ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 14/03/2025 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ 2 ವರ್ಷದಲ್ಲಿ ಎಷ್ಟು ಜನ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ನೀಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವ ಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ 2 ವರ್ಷದಲ್ಲಿ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ನೀಡಲಾಗಿರುವ ತಾಲ್ಲೂಕುವಾರು ವಿವರ ಈ ಕೆಳಕಂಡಂತಿವೆ.<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ಬೀದರ ಜಿಲ್ಲೆಯಲ್ಲಿ ನೋಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಶೈಕ್ಷಣಿಕ ಧನಸಹಾಯ ನೀಡಿರುವ ತಾಲ್ಲೂಕುವಾರು ವಿವರ; |

| ಕ್ರ. ಸಂ | ತಾಲೂಕು | 2022-23 |
|---|---|---|
| 1 | ಬೀದರ | 13658 |
| 2 | ಬಸವ ಕಲ್ಯಾಣ | 7213 |
| 3 | ಭಾಲ್ಕಿ | 9671 |
| 4 | ಔರದ್ | 7932 |
| 5 | ಹುಮನಾಬಾದ | 11203 |

2023-24ನೇ ಸಾಲಿನ ಶೈಕ್ಷಣಿಕ ಸಹಾಯಧನದ ಅರ್ಜಿಯನ್ನು ತಂತ್ರಾಂಶದಲ್ಲಿ ಸ್ವೀಕರಿಸಲಾಗಿದ್ದು, ಸದರಿ ಅರ್ಜಿಗಳನ್ನು ವಿಲೇವಾರಿ ಮಾಡಲು ಕ್ರಮ ವಹಿಸಲಾಗುತ್ತಿದೆ.

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**

ಈ ಮಂಡಳಿಯ ಮೂಲಕ ಜಾರಿಗೊಳಿಸುತ್ತಿರುವ "ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"ಯಡಿ ಕಳೆದ ಎರಡು ವರ್ಷಗಳಲ್ಲಿ 04 ವಿದ್ಯಾರ್ಥಿಗಳಿಗೆ ತಲಾ ರೂ.10,000/-ಗಳಂತೆ ಒಟ್ಟು ರೂ. 40,000/-ಗಳ ಶೈಕ್ಷಣಿಕ ಧನಸಹಾಯವನ್ನು ವಿತರಿಸಲಾಗಿದ್ದು, ತಾಲ್ಲೂಕುವಾರು ಮಾಹಿತಿಯು ಈ ಕೆಳಕಂಡತಿಂದೆ.

| ತಾಲ್ಲೂಕು ಹೆಸರು | 2023-24 | | 2024-25 | |
|---|---|---|---|---|
| | ವಿದ್ಯಾರ್ಥಿಗಳ ಸಂಖ್ಯೆ | ಮೊತ್ತ ರೂ. (ತಲಾ ರೂ.10.000/- ಗಳಂತೆ) | ವಿದ್ಯಾರ್ಥಿಗಳ ಸಂಖ್ಯೆ | ಮೊತ್ತ ರೂ. (ತಲಾ ರೂ.10,000/- ಗಳಂತೆ) |
| ಹುಮ್ನಾಬಾದ್ | 2 | ರೂ. 20,000/- | 2 | ರೂ. 20,000/- |
| **ಒಟ್ಟು** | | | | **ರೂ. 40,000/-** |

**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**

ಈ ಮಂಡಳಿಯಿಂದ ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ 2 ವರ್ಷದಲ್ಲಿ ಸಂಘಟಿತ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ನೀಡಿರುವ ತಾಲ್ಲೂಕುವಾರು ವಿವರ ಈ ಕೆಳಕಂಡಂತಿವೆ:-

| ತಾಲ್ಲೂಕು | 2023-24 | | 2024-25 | |
|---|---|---|---|---|
| | ವಿದ್ಯಾರ್ಥಿಗಳ ಸಂಖ್ಯೆ | ಮೊತ್ತ | ವಿದ್ಯಾರ್ಥಿಗಳ ಸಂಖ್ಯೆ | ಮೊತ್ತ |
| ಬೀದರ್ | 4 | 60,000 | 4 | 68,000 |
| ಬಸವ ಕಲ್ಯಾಣ | 1 | 8,000 | 1 | 8000 |
| ಔರದ್ | - | - | - | - |
| ಭಾಲ್ಕಿ | - | - | - | - |
| ಚಿಟಗೊಪ್ಪ | - | - | - | - |
| ಹುಲಸೂರು | - | - | - | - |
| ಹುಮ್ನಾಬಾದ್ | - | - | 1 | 20,000 |
| ಕಮಲಾನಗರ | - | - | - | - |
| **ಒಟ್ಟು** | **5** | **68,000** | **6** | **96,000** |

**ಆ)** ಹೊಸದಾಗಿ ಪ್ರೋತ್ಸಾಹ ಧನ ಪಡೆಯುವ ಸಲುವಾಗಿ ಎಷ್ಟು ಅರ್ಜಿಗಳು ಬಂದಿವೆ; (ತಾಲ್ಲೂಕುವಾರು ವಿವರ ನೀಡುವುದು)

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ 2023-24 ಮತ್ತು 2024-25ನೇ ಸಾಲಿನಲ್ಲಿ ಶೈಕ್ಷಣಿಕ ಸಹಾಯಧನದ ಅರ್ಜಿಗಳನ್ನು ಆಹ್ವಾನಿಸಲು ಎಸ್.ಎಸ್.ಪಿ ತಂತ್ರಾಂಶದ ಮೂಲಕ ಅವಕಾಶ ಕಲ್ಪಿಸಲಾಗಿದೆ. 2023-24ನೇ ಸಾಲಿನಲ್ಲಿ ಸ್ವೀಕೃತಗೊಂಡ ಶೈಕ್ಷಣಿಕ ಸಹಾಯಧನದ ಅರ್ಜಿಗಳಿಗೆ ಧನಸಹಾಯ ನೀಡುವ ಪ್ರಕ್ರಿಯೆಯು ಪ್ರಗತಿಯಲ್ಲಿದೆ ಮತ್ತು 2024-25ನೇ ಸಾಲಿನ ಶೈಕ್ಷಣಿಕ ಸಹಾಯಧನದ ಪ್ರೀ-ಮೆಟ್ರಿಕ್ ಅರ್ಜಿಗಳನ್ನು ಸ್ವೀಕರಿಸುವ ಅವಧಿಯು ಮುಕ್ತಾಯ ಗೊಂಡಿರುತ್ತದೆ. ಪೋಸ್ಟ್ ಮೆಟ್ರಿಕ್ ಶೈಕ್ಷಣಿಕ ಧನಸಹಾಯದ ಅರ್ಜಿಗಳನ್ನು ಸ್ವೀಕರಿಸುವ ಅವಧಿಯನ್ನು ದಿನಾಂಕ: 15/03/2025ರವರೆಗೆ ವಿಸ್ತರಿಸಲಾಗಿದೆ.

| | | |
|---|---|---|
| | | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವ ಹಿಸುತ್ತಿರುವ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಮತ್ತು ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗಳಲ್ಲಿ ಹೊಸದಾಗಿ ಪ್ರೋತ್ಸಾಹ ಧನ ಪಡೆಯುವ ಸಲುವಾಗಿ ಯಾವುದೇ ಅರ್ಜಿಗಳು ಸ್ವೀಕೃತವಾಗಿರುವುದಿಲ್ಲ. |
| ಇ) | ಪ್ರೋತ್ಸಾಹ ಧನ ಪಡೆಯಲು ಇರುವ ಮಾನದಂಡಗಳೇನು? (ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಢಳಿಗಳಲ್ಲಿ ಪ್ರೋತ್ಸಾಹ ಧನ ಪಡೆಯಲು ಇರುವ ಮಾನದಂಡಗಳ ವಿವರ ಈ ಕೆಳಕಂಡಂತಿವೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಶೈಕ್ಷಣಿಕ ಸಹಾಯಧನ ಪಡೆಯಲು ಅನುಸರಿಸಬೇಕಾದ ಮಾನದಂಡಗಳು/ ಸಲ್ಲಿಸಬೇಕಾದ ದಾಖಲೆಗಳ ವಿವರ ಈ ಕೆಳಕಂಡಂತಿದೆ:<br><br>• ಎಸ್.ಎಸ್.ಪಿ ತಂತ್ರಾಂಶದ ಮೂಲಕ ಆನ್‌ಲೈನ್ ನಲ್ಲಿ ಶೈಕ್ಷಣಿಕ ಸಹಾಯಕ್ಕೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ.<br>• ನೋಂದಾಯಿತ ಕಟ್ಟಡ ಕಾರ್ಮಿಕರಾಗಿರಬೇಕು ಹಾಗೂ ಸದಸ್ಯತ್ವ ಚಾಲ್ತಿಯಲ್ಲಿರಬೇಕು.<br>• ಫಲಾನುಭವಿಯ ಮಗ/ಮಗಳು ಉತ್ತೀರ್ಣರಾಗಿ ಮುಂದಿನ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಸಂಸ್ಥೆಯ ವಿವರ.<br>• ಶೈಕಣಿಕ ಸಹಾಯಧನ ಅರ್ಜಿಯನ್ನು ಮಂಡಳಿಯು ನಿಗದಿಪಡಿಸಿರುವ ಕಾಲಮಿತಿಯಲ್ಲಿ ಶೈಕ್ಷಣಿಕ ಅರ್ಜಿ ಸಲ್ಲಿಸಬೇಕು.<br>• ಶಾಲೆ/ಕಾಲೇಜಿನಿಂದ ಪಡೆದಿರುವ ಸ್ಯಾಟ್‌ಐಡಿ/ ಸ್ಟೂಡೆಂಟ್ ಐಡಿ ಸಂಖ್ಯೆಯನ್ನು ಹೊಂದಿರಬೇಕು.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br><br>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ಶೈಕ್ಷಣಿಕ ಸಹಾಯಧನ ಪಡೆಯಲು ಇರುವ ಮಾನದಂಡಗಳು ಈ ಕೆಳಕಂಡಂತಿದೆ;<br>• ಅಪಘಾತದಿಂದ ಮರಣ ಹೊಂದಿದ ಹಾಗೂ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಖಾಸಗಿ ವಾಣಿಜ್ಯ ಸಾರಿಗೆ ವಾಹನದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್ ಗಳ ಮಕ್ಕಳಿಗೆ ಮಾತ್ರ ಅನ್ವಯ. |

| | | |
|---|---|---|
| | | • ಮೊದಲ ಜೀವಂತ ಇಬ್ಬರು ಮಕ್ಕಳಿಗೆ ಮಾತ್ರ ಅನ್ವಯ.<br>• 1ನೇ ತರಗತಿಯಿಂದ 12ನೇ ತರಗತಿಯವರೆಗಿನ ವ್ಯಾಸಂಗಕ್ಕಾಗಿ ಮಾತ್ರ ಅನ್ವಯ.<br>• ಕರ್ನಾಟಕ ರಾಜ್ಯದಲ್ಲಿ ವ್ಯಾಸಂಗ ಮಾಡುತ್ತಿರಬೇಕು.<br>• ಹಿಂದಿನ ತರಗತಿಯಲ್ಲಿ ಉತ್ತೀರ್ಣರಾಗಿರತಕ್ಕದ್ದು.<br><br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br>ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಪಡೆಯಲು ಇರುವ ಮಾನದಂಡಗಳ ವಿವರ ಈ ಕೆಳಗೆ ನೀಡಲಾಗಿದೆ.<br>• ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾ/ ಪ.ಪಂಗಡದ ವಿದ್ಯಾರ್ಥಿಗಳು ಶೇ.45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು.<br>• ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು.<br>• ಕಾರ್ಮಿಕನ ಮಾಸಿಕ ವೇತನ ರೂ.35,000/- ಕ್ಕಿಂತ ಕಡಿಮೆ ಇರಬೇಕು. |

**ಕಾಇ 94 ಎಲ್ ಇಟಿ 2025**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**